# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 17.10.2011**

## ***ರಸ್ತೆ ನಾಮಕರಣ : ಸಾರ್ವಜನಿಕ ಆಕ್ಷೇಪಣೆಗೆ ಆಹ್ವಾನ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನಂ.88ರ ವ್ಯಾಪ್ತಿಯಲ್ಲಿ ಬರುವ ದೂಪನಹಳ್ಳಿ 100 ಅಡಿ ರಸ್ತೆಯ ಪೂರ್ವಕ್ಕಿರುವ 15ನೇ ಮುಖ್ಯರಸ್ತೆಗೆ ***"ಶ್ರೀ ಭುವನೇಶ್ವರಿ ದೇವಿ ದೇವಸ್ಥಾನದ ರಸ್ತೆ"*** ಎಂದು ನಾಮಕರಣ ಮಾಡಲು ದಿನಾಂಕ: 07.09.2011 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಆದುದರಿಂದ ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಆಕ್ಷೇಪಣೆಗಳಿದ್ದಲ್ಲಿ ಈ ಪತ್ರಿಕಾ ಪ್ರಕಟಣೆ ಹೊರಡಿಸಲಾದ ದಿನಾಂಕದಿಂದ 30 ದಿನದೊಳಗೆ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ನರಸಿಂಹರಾಜ ಚೌಕ, ಬೆಂಗಳೂರು-02, ಇವರಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ತಿಳಿಸಲಾಗಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 17.10.2011**

ಡಿಸೆಂಬರ್ ತಿಂಗಳ ಒಳಗಾಗಿ ಬೃಹತ್ ನೀರುಗಾಲುವೆಯ ಎಲ್ಲಾ ಒತ್ತುವರಿಗಳನ್ನು ಕಡ್ಡಾಯವಾಗಿ ತೆರವುಗೊಳಿಸುವಂತೆ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಇಂದು ವಲಯ ಅಪರ / ಜಂಟಿ ಆಯುಕ್ತರು ಮತ್ತು ಮುಖ್ಯ ಅಭಿಯಂತರರುಗಳಿಗೆ ಎಚ್ಚರಿಕೆ ನೀಡಿದ್ದಾರೆ.

ಪಾಲಿಕೆಯ ಆಯುಕ್ತರು ಇಂದು ವಲಯ ಮಟ್ಟದ ಅಪರ / ಜಂಟಿ ಆಯುಕ್ತರು ಮತ್ತು ಮುಖ್ಯ ಅಭಿಯಂತರರುಗಳ ಸಭೆ ಕರೆದು, ಬೃಹತ್ ನೀರುಗಾಲುವೆ ಒತ್ತುವರಿ ತೆರವುಗೊಳಿಸಿರುವ ಬಗ್ಗೆ ಪರಿಶೀಲನೆ ನಡೆಸಿದರು. ಪಾಲಿಕೆಯ ವ್ಯಾಪ್ತಿಯಲ್ಲಿ ಈಗಾಗಲೇ ಒಟ್ಟು 900ಕ್ಕೂ ಹೆಚ್ಚು ಬೃಹತ್ ನೀರುಗಾಲುವೆ ಒತ್ತುವರಿಗಳನ್ನು ಗುರುತಿಸಲಾಗಿದ್ದು, ಅದರಲ್ಲಿ ಇದುವರೆವಿಗೆ 650 ಒತ್ತುವರಿಗಳನ್ನು ತೆರವುಗೊಳಿಸಲಾಗಿರುತ್ತದೆ. ಉಳಿದ 250 ಒತ್ತುವರಿಗಳನ್ನು ತೆರವುಗೊಳಿಸುವ ಕಾರ್ಯಾಚರಣೆ ಕೂಡಲೇ ಪ್ರಾರಂಭಿಸಬೇಕು ಮತ್ತು ಇದು ಅಂತಿಮ ಗಡುವಾಗಿದ್ದು, ವಲಯ ಮಟ್ಟದ ಅಧಿಕಾರಿಗಳು ಇದನ್ನು ಪಾಲಿಸದಿದ್ದಲ್ಲಿ ಶಿಸ್ತಿನ ಕ್ರಮ ಜರುಗಿಸಲಾಗುವುದೆಂದು ಮತ್ತೊಮ್ಮೆ ಎಚ್ಚರಿಸಿದರು.

ಡಿಸೆಂಬರ್ ತಿಂಗಳವರೆವಿಗೂ ಪದೇ ಪದೇ ಪರಿಶೀಲನಾ ಸಭೆಗಳನ್ನು ನಡೆಸುವುದಿಲ್ಲ. ಬೃಹತ್ ನೀರುಗಾಲುವೆ ಒತ್ತುವರಿಗಳನ್ನು ತೆರವುಗೊಳಿಸುವ ಜವಾಬ್ದಾರಿಯನ್ನು ವಲಯ ಅಧಿಕಾರಿಗಳು ಮತ್ತು ಬೃಹತ್ ನೀರುಗಾಲುವೆ ಮುಖ್ಯ ಅಭಿಯಂತರರ ಮೇಲೆ ಇದೆ. ಕೂಡಲೇ ಕಾರ್ಯಾಚರಣೆ ಪ್ರಾರಂಭಿಸಲು ಸೂಚಿಸಿ, ಬಿ.ಎಂ.ಟಿ.ಎಫ್. ಮತ್ತು ಸ್ಥಳೀಯ ಪೋಲಿಸ್‌ರವರ ಸಹಾಯವನ್ನು ಪಡೆದುಕೊಂಡು ಬೃಹತ್ ನೀರುಗಾಲುವೆಯ ಒತ್ತುವರಿಗಳನ್ನು ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸಲು ತಿಳಿಸಿದರು.

ಇದೇ ಸಂದರ್ಭದಲ್ಲಿ ಪ್ರಾಥಮಿಕ ಮತ್ತು ಸೆಕೆಂಡರಿ ಡ್ರೈನ್‌ಗಳಿಂದ ಹೂಳೆತ್ತುವ ಕಾರ್ಯ ನಡೆಯುತ್ತಿದ್ದು, ಇದಕ್ಕೆ ಸಂಬಂಧಿಸಿದಂತೆ ಸೂಕ್ತ ದಾಖಲೆಗಳನ್ನು ಸಿದ್ಧಪಡಿಸಿಕೊಳ್ಳಬೇಕು. ಹೂಳೆತ್ತುವ ಮುಂಚಿತವಾಗಿ ಆ ಸ್ಥಳದ ಪೂರ್ವಳತೆ, ಅಂತಿಮ ಅಳತೆ ಮತ್ತು ಹೂಳು ತೆಗೆಯುತ್ತಿರುವ ಫೋಟೋಗ್ರಫಿ, ವಿಡಿಯೋಗ್ರಫಿ ಹಾಗೂ ವಾಹನಗಳ ಚಲನವಲನಗಳ ಪುಸ್ತಕ ಮುಂತಾದ ದಾಖಲೆಗಳನ್ನು ಸಿದ್ಧಪಡಿಸಿಕೊಳ್ಳಬೇಕೆಂದು ತಿಳಿಸಿದರು. ಈ ಹೂಳೆತ್ತುವ ಕಾರ್ಯ ಪಾರದರ್ಶಕತೆಯಿಂದ ಕೂಡಿರಬೇಕು. ಈ ಕಾಮಗಾರಿಯಲ್ಲಿ ಯಾವುದೇ ಲೋಪದೋಷಗಳು ಕಂಡುಬಂದಲ್ಲಿ ಸಂಬಂಧಪಟ್ಟ ಜಂಟಿ ಆಯುಕ್ತರು, ಮುಖ್ಯ ಅಭಿಯಂತರರು ಮತ್ತು ಕಾರ್ಯಪಾಲಕ ಅಭಿಯಂತರರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದೆಂದು ತಿಳಿಸಿದರು.

ಈ ಕಾಮಗಾರಿಗೆ ಸಂಬಂಧಪಟ್ಟ ಬಿಲ್ಲುಗಳನ್ನು ಪಾವತಿಸುವ ಮುಂಚಿತವಾಗಿ ಕಡತಗಳನ್ನು ಟಿ.ವಿ.ಸಿ.ಸಿ. ವಿಭಾಗಕ್ಕೆ ಕಳುಹಿಸಿ, ಅವರಿಂದ ಸ್ಥಳ ಪರಿಶೀಲನೆ ಮಾಡಿ ಅವರ ವರದಿಯೊಂದಿಗೆ ಮತ್ತು ಎಲ್ಲಾ ರೀತಿಯ ದಾಖಲೆಗಳೊಂದಿಗೆ ಬಿಲ್ ಪಾವತಿಗಾಗಿ ಕಳುಹಿಸುವುದು. ಈ ಸಂಬಂಧ ಈಗಾಗಲೇ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ಅವುಗಳನ್ನು ತಪ್ಪದೇ ಪಾಲಿಸಲು ಆಯುಕ್ತರು ವಲಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**